## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಸೂಪರ್ ಸ್ಪೆಷಾಲಿಟಿ ವೈದ್ಯರ ನಿವೃತ್ತಿ ವಯಸ್ಸನ್ನು 60 ವರ್ಷದಿಂದ 65 ವರ್ಷಕ್ಕೆ ಹೆಚ್ಚಿಸುವ ಕುರಿತು.

ಓದಲಾಗಿದೆ: 1.ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ಏಕಕಡತ ಸಂಖ್ಯೆ:DME/ADN2/ SRO1/37/2025.

2 ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 341 EXP-5/2025 ದಿನಾಂಕ;25.04.2025

3. ಸಿಆಸುಇ ಇಲಾಖೆಯ (ಸೇವಾನಿಯಮಗಳು) ಹಿಂಬರಹ ಸಂಖ್ಯೆ: ಸಿಆಸು ಇ 23 ಸೇನಿಸಿ/2025 ದಿನಾಂಕ:03.05.2025.

4. ಕಾನೂನು ಇಲಾಖೆಯ ಟಿಪ್ಪಣಿ ಸಂಖ್ಯೆ: ಲಾ ಅಭಿಪ್ರಾಯ/322/2025 ದಿನಾಂಕ:07.05.5025

*******

**ಪ್ರಸ್ತಾವನೆ:**

ಮೇಲೆ ಓದಲಾದ(01)ರ ಏಕಕಡತದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ 22 ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಹಾಗೂ 10 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಸಂಸ್ಥೆಗಳಲ್ಲಿ ಒಟ್ಟಾರೆ 508 ಸೂಪರ್ ಸ್ಪೆಷಾಲಿಟಿ ಹುದ್ದೆಗಳು ಮಂಜೂರಾಗಿದ್ದು, ಮಂಜೂರಾದ ಹುದ್ದೆಗಳಿಗೆ ಎದುರಾಗಿ 232 ಖಾಯಂ ಸೂಪರ್ ಸ್ಪೆಷಾಲಿಟಿ ವೈದ್ಯರುಗಳು ಕರ್ತವ್ಯ ನಿರ್ವಹಿಸುತ್ತಿದ್ದು, 276 ಸೂಪರ್ ಸ್ಪೆಷಾಲಿಟಿ ವೈದ್ಯರ ಹುದ್ದೆಗಳು ಖಾಲಿಯಿರುತ್ತವೆ ಎಂದು, ರಾಜ್ಯ ಸರ್ಕಾರದ ನೀತಿಯಂತೆ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ನಿವೃತ್ತಿ ವಯಸ್ಸು 60 ಆಗಿರುತ್ತದೆ. ರಾಜ್ಯದಲ್ಲಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ಕೊರತೆಯಿಂದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಬೋಧನೆ ಹಾಗೂ ರೋಗಿಗಳಿಗೆ ಚಿಕಿತ್ಸೆ ನೀಡುವಲ್ಲಿ ತೊಂದರೆಯಾಗುತ್ತಿರುವುದರಿಂದ, ಸದರಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ವಯೋ ನಿವೃತ್ತಿ ವಯಸ್ಸನ್ನು 60ರಿಂದ 65 ವರ್ಷಕ್ಕೆ ಹೆಚ್ಚಿಸುವಂತೆ ಕೋರಿ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರು ಪ್ರಸ್ತಾಪವನೆ ಸಲ್ಲಿಸಿರುತ್ತಾರೆ.

ಭಾರತ ಸರ್ಕಾರದ ಆದೇಶ ಸಂಖ್ಯೆ:DOPT-1669894287310, ದಿನಾಂಕ:01-12-2022ರಲ್ಲಿ The age of superannuation in respect of the doctors shall be sixty-two years unless they exercise the option of posting to Teaching, Clinical, Patient Care, Implementation of Health programmes,

Public Health programmes and functions including advisory and consultancy depending on their expertise and experience, as decided by the Competent Authority in the concerned Ministry or Department from time to time, in case the desire to continue in their service upto the age of sixty-five years." ಎಂದು ಅವಕಾಶ ಕಲ್ಪಿಸಲಾಗಿರುತ್ತದೆ.

ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ ಆಇ ವೆಚ್ಚ-5/2025, ದಿನಾಂಕ:25.04.2025 ರಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಸ್ತಾವನೆಗೆ ಸಹಮತಿ ಇರುವುದಿಲ್ಲ. ಕಾನೂನು ಇಲಾಖೆಯ ಟಿಪ್ಪಣಿ ಸಂಖ್ಯೆ:ಲಾ ಅಭಿಪ್ರಾಯ 322 2025, ದಿನಾಂಕ:07.05.2025ರಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಸ್ತಾವನೆಗೆ ಸಹಮತಿಸಿರುತ್ತದೆ ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾನಿಯಮಗಳು) ಹಿಂಬರಹ ಸಂಖ್ಯೆ:ಸಿಆಸುಇ 23 ಸೇನಿಸಿ 2025, ದಿನಾಂಕ:03.05.2025ರಲ್ಲಿ ನೀಡಿರುವ ಅಭಿಪ್ರಾಯಗಳನ್ನು ಪರಿಗಣಿಸಲಾಗಿರುತ್ತದೆ.

ವೈದ್ಯಕೀಯ ಶಿಕ್ಷಣ ಇಲಾಖೆಯು ರಾಜ್ಯದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಸ್ಥಾಪಿಸುವ ಸಂಬಂಧ ಡಾ: ಸಿ.ಎನ್ ಮಂಜುನಾಥ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯ ಶಿಫಾರಸ್ಸುಗಳಲ್ಲಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ವಯೋ ನಿವೃತ್ತಿ ವಯಸ್ಸನ್ನು ಹೆಚ್ಚಿಸಲು ಶಿಫಾರಸ್ಸು ಮಾಡಿರುತ್ತದೆ.

ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳಲ್ಲಿ ಒಟ್ಟಾರೆ 508 ಸೂಪರ್ ಸ್ಪೆಷಾಲಿಟಿ ಹುದ್ದೆಗಳು ಮಂಜೂರಾಗಿದ್ದು, ಸದರಿ ಮಂಜೂರಾದ ಹುದ್ದೆಗಳ ಪೈಕಿ 232 ಖಾಯಂ ಸೂಪರ್ ಸ್ಪೆಷಾಲಿಟಿ ವೈದ್ಯರುಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಪ್ರಸಕ್ತ ಸಾಲಿನಲ್ಲಿ, 60 ವರ್ಷ ಪೂರ್ಣಗೊಳಿಸಲಿರುವ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ಸಂಖ್ಯೆ 34 ಆಗಿದ್ದು, ಸದರಿ ವೈದ್ಯರುಗಳಿಗೆ ಪ್ರಸ್ತುತ ನೀಡುತ್ತಿರುವ AICTE ವೇತನ ಶ್ರೇಣಿಯಲ್ಲಿ ವಯೋನಿವೃತ್ತಿ ಹೊಂದುವವರೆಗೆ ಮುಂದುವರೆಸಬೇಕಾಗಿದೆ.

ಸೂಪರ್ ಸ್ಪೆಷಾಲಿಟಿ ವೈದ್ಯರುಗಳು ನೀಟ್ ಪರೀಕ್ಷೆ ಮೂಲಕ ಸೂಪರ್ ಸ್ಪೆಷಾಲಿಟಿ ಕೋರ್ಸ್‌ಗೆ ಪ್ರವೇಶ ಪಡೆದು, ಮೂರು ವರ್ಷಗಳ ಕೋರ್ಸಿನ ಮೂಲಕ ಹೆಚ್ಚಿನ ಅನುಭವವನ್ನು ಪಡೆದಿರುತ್ತಾರೆ. ಸದರಿ ಕೋರ್ಸ್ ಅನ್ನು ಪೂರ್ಣಗೊಳಿಸುವಾಗ ಸುಮಾರು 35 ವರ್ಷಗಳಾಗಿರುತ್ತದೆ. ಸೇವಾನಿರತ ವೈದ್ಯರುಗಳು ಈ ರೀತಿ ಸೂಪರ್ ಸ್ಪೆಷಾಲಿಟಿ ಕೋರ್ಸ್ ಅನ್ನು ಪೂರ್ಣಗೊಳಿಸುವ ವೇಳೆಗೆ 40 ರಿಂದ 45 ವರ್ಷಗಳನ್ನು ದಾಟಿರುತ್ತಾರೆ. ಇದರಿಂದಾಗಿ ಸದರಿ ವೈದ್ಯರುಗಳು ಸರ್ಕಾರಿ ಸೇವೆಯಲ್ಲಿ 60 ವರ್ಷ ವಯಸ್ಸಿಗೆ ವಯೋನಿವೃತ್ತಿ ಹೊಂದುವ ಸಮಯದಲ್ಲಿ ಕೇವಲ 15ರಿಂದ 20 ವರ್ಷಗಳ ಸೇವೆಯನ್ನು ಸಲ್ಲಿಸಲು ಮಾತ್ರ ಸಾಧ್ಯವಾಗುತ್ತದೆ. ಇದರಿಂದಾಗಿ ಸದರಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳು ಹೊಂದಿರುವ ವೃತ್ತಿ ಅನುಭವವನ್ನು ಸಂಪೂರ್ಣವಾಗಿ ಉಪಯೋಗಿಸಲು ಸಾಧ್ಯವಾಗುವುದಿಲ್ಲ.

ರಾಜ್ಯದ ಸ್ವಾಯತ್ತ ಸಂಸ್ಥೆಗಳಾದ ವೈದ್ಯಕೀಯ ಕಾಲೇಜುಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ನೀಡುತ್ತಿರುವ ವೇತನ ಖಾಸಗಿ ಆಸ್ಪತ್ರೆಗಳಿಗೆ ಹೋಲಿಸಿದಲ್ಲಿ ಕಡಿಮೆಯಿರುವುದರಿಂದ, ಸೇವೆಗೆ ಸೇರಲು ಇಚ್ಛೆ

ವ್ಯಕ್ತಪಡಿಸುವ ವೈದ್ಯರಗಳ ಪ್ರಮಾಣವು ಕಡಿಮೆ ಇರುತ್ತದೆ. ಸರ್ಕಾರವು ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ವಯೋ ನಿವೃತ್ತಿಯನ್ನು 65 ವರ್ಷಗಳಿಗೆ ವಿಸ್ತರಿಸಿದ್ದಲ್ಲಿ, ಸದರಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ಸೇವಾ ಅನುಭವದ ಲಾಭವನ್ನು ಪಡೆದುಕೊಳ್ಳಬಹುದಾಗಿದ್ದು, ಸೂಪರ್ ಸ್ಪೆಷಾಲಿಟಿ ವೃತ್ತಿಯು ಉನ್ನತ ಮಟ್ಟದ ತರಬೇತಿ ಹಾಗೂ ವೃತ್ತಿಪರತೆಯನ್ನು ಹೊಂದಿರುತ್ತದೆ.

ಸ್ವಾಯತ್ತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೂಪರ್ ಸ್ಪೆಷಾಲಿಟಿ ವೈದ್ಯರುಗಳು 65 ವರ್ಷಕ್ಕೆ ವಯೋನಿವೃತ್ತಿ ಹೊಂದಿದಲ್ಲಿ ರಾಷ್ಟ್ರೀಯ ವೈದ್ಯಕೀಯ ಆಯೋಗದ ಮಾರ್ಗಸೂಚಿಯಲ್ಲಿ ನಿಗದಿಪಡಿಸಿರುವ ಬೋಧಕ ಸಿಬ್ಬಂದಿಗಳ ಸಂಖ್ಯೆಯಲ್ಲಿ ಕೊರತೆ ಉಂಟಾಗುವುದನ್ನು ತಡೆಯಬಹುದಾಗಿರುತ್ತದೆ.

ಪ್ರಸ್ತುತ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಖಾಲಿ ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳ ಪ್ರಮಾಣ ತೀವ್ರಗತಿಯಲ್ಲಿ ಕಡಿಮೆಯಾಗಿರುತ್ತದೆ. ಕೇಂದ್ರ ಸರ್ಕಾರದ ಅಧೀನದಲ್ಲಿ ಬರುವ ವೈದ್ಯರುಗಳು ಬೋಧನೆ, ಕ್ಲಿನಿಕಲ್, ಪೇಷಂಟ್ ಕೇರ್ ಹಾಗೂ ಇತ್ಯಾದಿ ಸೇವೆಗಳನ್ನು ನೀಡಲು ಒಪ್ಪಿದಲ್ಲಿ ಅವರುಗಳ ವಯೋ ನಿವೃತ್ತಿ ವಯಸ್ಸನ್ನು 65 ವರ್ಷಗಳಿಗೆ ಹೆಚ್ಚಿಸಲು ಸಕ್ಷಮ ಪ್ರಾಧಿಕಾರಕ್ಕೆ ಅವಕಾಶ ಕಲ್ಪಿಸಿರುತ್ತದೆ.

ಆದ್ದರಿಂದ, ಪ್ರಸ್ತುತ ಇರುವ ವಯೋನಿವೃತ್ತಿ ವಯಸ್ಸನ್ನು 65 ವರ್ಷಗಳಿಗೆ ಹೆಚ್ಚಿಸುವುದರಿಂದ, ಸರ್ಕಾರದ ಸೂಪರ್ ಸ್ಪೆಷಾಲಿಟಿ ಸಂಸ್ಥೆಗಳು, ರೋಗಿಗಳು ಹಾಗೂ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, *ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ 22 ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಹಾಗೂ 10 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ಕೊರತೆ ಇರುವುದರಿಂದ, ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ನಿವೃತ್ತಿ ನಂತರ ಬದಲಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳು ಇಲಾಖೆಯಲ್ಲಿ ಲಭ್ಯವಿಲ್ಲದಿರುವುದರಿಂದ ಹಾಗೂ ಮುಕ್ತ ಮಾರುಕಟ್ಟೆಯಲ್ಲಿ ಅಭ್ಯರ್ಥಿಗಳು ಸಿಗುತ್ತಿಲ್ಲವಾದ್ದರಿಂದ, ಸೇವೆಯಲ್ಲಿ ಮುಂದುವರೆಯುವ ಸೂಪರ್ ಸ್ಪೆಷಾಲಿಟಿ ವೈದ್ಯರುಗಳನ್ನು ಆಡಳಿತಾತ್ಮಕ ಅಥವಾ ಇತರೆ ಹುದ್ದೆಗಳಿಗೆ ನೇಮಕಾತಿ ಮಾಡುವಂತಿಲ್ಲ ಎಂಬ ಷರತ್ತನ್ನು ವಿಧಿಸಿ, ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ನಿವೃತ್ತಿ ವಯಸ್ಸನ್ನು 60 ರಿಂದ 65 ವರ್ಷಗಳಿಗೆ ಹೆಚ್ಚಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.*

**<u>ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 61 ಆರ್‌ಜಿಯು 2025, ದಿನಾಂಕ:16-05-2025.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ 22 ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಹಾಗೂ 10 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ

ಪ್ರಸ್ತುತ ಖಾಯಂ ಆಗಿ ಕಾರ್ಯನಿರ್ವಹಿಸುತ್ತಿರುವ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ವಯೋನಿವೃತ್ತಿ ವಯಸ್ಸನ್ನು ಈ ಕೆಳಕಂಡ ಷರತ್ತಿಗೊಳಪಟ್ಟು 60 ರಿಂದ 65 ವರ್ಷಗಳಿಗೆ ಹೆಚ್ಚಿಸಿ ಆದೇಶಿಸಿದೆ.

**ಷರತ್ತು:**

1. 60 ರಿಂದ 65 ವರ್ಷಗಳಿಗೆ ವಯೋನಿವೃತ್ತಿ ವಯಸ್ಸು ಹೆಚ್ಚಳ ಮಾಡಲಾದ ಸೂಪರ್ ಸ್ಪೆಷಾಲಿಟಿ ವೈದ್ಯರುಗಳನ್ನು ಆಡಳಿತಾತ್ಮಕ ಅಥವಾ ಇತರೆ ಹುದ್ದೆಗಳಿಗೆ ನೇಮಕ ಮಾಡುವಂತಿಲ್ಲ.
2. *60 ರಿಂದ 65 ವರ್ಷಗಳಿಗೆ ವಯೋನಿವೃತ್ತಿ ವಯಸ್ಸು ಹೆಚ್ಚಳ ಮಾಡಲಾದ ಸೂಪರ್ ಸ್ಪೆಷಾಲಿಟಿ ವೈದ್ಯರುಗಳಿಗೆ ಸಂಬಳ, ಪಿಂಚಣಿ ಮತ್ತು ಇತರೆ ಆರ್ಥಿಕ ಸೌಲಭ್ಯಗಳನ್ನು ವಿಸ್ತರಿಸುವ ಕುರಿತು ಆರ್ಥಿಕ ಇಲಾಖೆಯ ಸಹಮತಿ ಪಡೆದು ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.*

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ ಆಇ ವೆಚ್ಚ-5/2025 ದಿನಾಂಕ:25.04.2025 ಹಾಗೂ ಸಚಿವ ಸಂಪುಟ ಟಿಪ್ಪಣಿಯ ವಿಷಯ ಸಂಖ್ಯೆ:ಸಿ:356/2025, ದಿನಾಂಕ:09-05-2025ರಲ್ಲಿ ನೀಡಿರುವ ಅನುಮೋದನೆಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/05/2025

**(ಆರ್. ಮಂಜುನಾಥ)**
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ &ಎಸ್ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು(ಜಿ&ಇ & ಆರ್.ಎಸ್.ಎ) ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು(ಎ&ಇ) ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
4. ಸರ್ಕಾರದ ಪ್ರಧಾನಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಸಿಆಸುಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.

7. ಕುಲಸಚಿವರು, ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾಲಯ, ಬೆಂಗಳೂರು.
8. ಸರ್ಕಾರದ ಅಪರ ಕಾರ್ಯದರ್ಶಿ(ಸಚಿವ ಸಂಪುಟ) ಶಾಖೆ, ವಿಧಾನ ಸೌಧ, ಬೆಂಗಳೂರು.
9. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿ.ಎಂ.ಸಿ.&ಆರ್.ಐ. ಹಳೆಯ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು.
10. ರಾಜ್ಯದ ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳು & ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು (ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಮುಖಾಂತರ).
11. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿ.ಎಂ.ಸಿ.&ಆರ್.ಐ. ಹಳೆಯ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5) ವಿಧಾನಸೌಧ, ಬೆಂಗಳೂರು.
14. ಯೋಜನಾಧಿಕಾರಿ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿ.ಎಂ.ಸಿ.&ಆರ್.ಐ. ಹಳೆಯ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಮಾನ್ಯ ವೈದ್ಯಕೀಯ ಶಿಕ್ಷಣ, ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
4. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.